ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಗುರುವಾರ, ದಿನಾಂಕ : 24 ನೇ ಸೆಪ್ಟೆಂಬರ್, 2020

ಕೆರೆಗಳ ಅಭಿವೃದ್ಧಿ ಬಗ್ಗೆ

ಶ್ರೀ ಎಸ್. ಎಲ್. ಭೋಜೇಗೌಡ(ಶಿಕ್ಷಕರ ಕ್ಷೇತ್ರ) –

583 (506) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿರುವ ಒಟ್ಟು ಕೆರೆಗಳೆಷ್ಟು; ಸರ್ಕಾರದಿಂದ ಇದುವರೆವಿಗೂ ದೊರಕಿದ ಅನುದಾನವೆಷ್ಟು;

(ಆ) ಕೆರೆಗಳ ಪುನಶ್ಚೇತನ ಮತ್ತು ಅಭಿವೃದ್ಧಿಗೆ ಸರ್ಕಾರವು ಕೈಗೊಂಡಿರುವ ಕ್ರಮಗಳೇನು;

(ಇ) ಹಲವು ಕೆರೆಗಳು ಅಭಿವೃದ್ಧಿಯನ್ನು ಕಾಣದೇ, ಹೂಳು ತುಂಬಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ರೀತಿ ಪಾಳು ಬಿದ್ದಿರುವ ಕೆರೆಗಳೆಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಈ) ಕಳೆದ 3 ವರ್ಷಗಳಲ್ಲಿ ರಾಜ್ಯದಲ್ಲಿ ಪುನಶ್ಚೇತನ ಮತ್ತು ಅಭಿವೃದ್ಧಿಗೊಂಡಿರುವ ಕೆರೆಗಳೆಷ್ಟು; ಬಿಡುಗಡೆಯಾದ ಅನುದಾನವೆಷ್ಟು?